ಗುರುವಾರ 11–09–2025 ಬೆಂಗಳೂರು ಬೆಲೆ: 5ರೂ, 4ಪುಟಗಳು ಸಂಪುಟ 01–ಸಂಚಿಕೆ 43 Digital Varthe Kannada Daily Volume 01 - Issue 43 Thursday 11-09-2025 Price: 5/- Rs 2 Pages Bengalore

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

DIGITAL VARTHE
www.digitalvarthe.com
digitalvarthe@gmail.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## ಬುರುಡೆ ಪ್ರಕರಣ :ಮತ್ತೆ ಆರು ಮಂದಿಯ ವಿಚಾರಣೆ



ಬೆಂಗಳೂರು: ಧರ್ಮಸ್ಥಳ ಬುರುಡೆ ಪ್ರಕರಣ ಸಂಬಂಧ ಗಿರೀಶ್ ಮಟ್ಟಣ್ಣನವರ್ ಸೇರಿದಂತೆ ಆರು ಮಂದಿ ಇಂದು ಮತ್ತೆ ಬೆಳ್ತಂಗಡಿಯ ಎಸ್‌ಐಟಿ ಕಚೇರಿಗೆ ವಿಚಾರಣೆಗೆ ಆಗಮಿಸಿದ್ದಾರೆ.ಗಿರೀಶ್ ಮಟ್ಟಣ್ಣನವರ್, ಜಯಂತ್ ಟಿ, ಯೂಟ್ಯೂಬರ್‌ರಸ ಗಳಾದ ಅಭಿಷೇಕ್ ಮತ್ತು ಮುನಾಫ್ ಇಂದು ಬೆಳಗ್ಗೆ 11 ಗಂಟೆ ಸುಮಾರಿನಲ್ಲಿ ಕಚೇರಿಗೆ ಹಾಜರಾದರು.ಸಾಕ್ಷಿ ದೂರುದಾರನಾಗಿರುವ ಚಿನ್ನಯ್ಯನಿಗೆ ಜಯಂತ್ ಟಿ. ತಮ ಬಗಲಗುಂಟೆಯ ಮಲ್ಲಸಂದ್ರ ಮನೆಯಲ್ಲಿ ಆಶ್ರಯ ನೀಡಿ ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂಬ ಮಾಹಿತಿ ಹಿನ್ನೆಲೆಯಲ್ಲಿ ಅವರನ್ನು ಸಹ ನಾಲ್ಕೈದು ಭಾರಿ ವಿಚಾರಣೆಗೆ ಒಳಪಡಿಸಿ ಮಾಹಿತಿಯನ್ನು ಪಡೆದುಕೊಳ್ಳಲಾಗಿದ್ದು, ಇಂದೂ ಸಹ ವಿಚಾರಣೆಗೆ ಒಳಪಡಿಸಿ ಮತ್ತಷ್ಟು ವಿವರಗಳನ್ನು ಎಸ್‌ಐಟಿ ಕಲೆಹಾಕುತ್ತಿದೆ.

ಈ ಪ್ರಕರಣದಲ್ಲಿ ಗಿರೀಶ್ ಮಟ್ಟಣ್ಣನವರ್‌ನ್ನು ಈಗಾಗಲೇ ಎಸ್‌ಐಟಿ ಅಧಿಕಾರಿಗಳು ವಿಚಾರಣೆ ನಡೆಸಿ ಕೆಲವು ಮಾಹಿತಿಗಳನ್ನು ಪಡೆದುಕೊಂಡಿದ್ದರೂ ತಲೆ ಬುರುಡೆಯನ್ನು ಚಿನ್ನಯ್ಯನಿಗೆ ಯಾರು ತಂದುಕೊಟ್ಟಿದ್ದರು ಎಂಬುವುದರ ಬಗ್ಗೆ ಇಂದು ಮತ್ತೆ ವಿಚಾರಣೆ ನಡೆಸಲಾಗಿದೆ. ಸೌಜನ್ಯ ಮಾವ ವಿಠಲ್‌ಗೌಡ ಧರ್ಮಸ್ಥಳದ ಕಾಡಿನಿಂದ ಬುರುಡೆ ತಂದಿರುವುದಾಗಿ ಮಾಹಿತಿ ಹಿನ್ನೆಲೆಯಲ್ಲಿ ಅವರನ್ನು ಸಹ ಈಗಾಗಲೇ ತೀವ್ರ ವಿಚಾರಣೆಗೆ ಒಳಪಡಿಸಿದ್ದ ಎಸ್‌ಐಟಿ, ಬುರುಡೆ ತಂದಿದ್ದ ಸ್ಥಳದಲ್ಲಿಯೂ ಸಹ ಮಹಜರು ನಡೆಸಿದೆ. ಇಂದು ಮತ್ತೆ ವಿಚಾರಣೆ ನಡೆಸಿ ಕೆಲವು ಮಾಹಿತಿಗಳನ್ನು ಪಡೆದುಕೊಂಡಿದೆ.

ಅದೇ ರೀತಿ ಯೂಟ್ಯೂಬರ್ ಅಭಿಷೇಕ್, ಅನನ್ಯಭಟ್ ವಿಚಾರವಾಗಿ ಸುಜಾತಾಭಟ್ ಅವರ ಸಂದರ್ಶನ ನಡೆಸಿ ,ಹೇಳಿಕೆ ಪಡೆದುಕೊಂಡು ಅದನ್ನು ವಿಡಿಯೋ ಮಾಡಿ ವೈಭವೀಕರಿಸಿ ಸಾಮಾಜಿಕ ಜಾಲಾ ತಾಣದಲ್ಲಿ ಬಿತ್ತರಿಸಿದ್ದನು. ಈ ವಿಚಾರವಾಗಿ ಈಗಾಗಲೇ ಆತನನ್ನು ಎಸ್‌ಐಟಿ ನಾಲ್ಕೈದು ಭಾರಿ ವಿಚಾರಣೆ ನಡೆಸಿದ್ದು ಇಂದು ಮತ್ತಷ್ಟು ಮಾಹಿತಿಯನ್ನು ಕಲೆಹಾಕುತ್ತಿದೆ. ಅಲ್ಲದೇ ಕೇರಳದ ಲಾರಿ ಮಾಲೀಕ ಹಾಗೂ ಯೂಟ್ಯೂಬರ್ ಮುನಾಫ್‌ನನ್ನು ಸಹ ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ನೋಟೀಸ್ ನೀಡಿತ್ತು. ಲಾರಿ ಮಾಲೀಕನು ಆಗಿರುವ ಮುನಾಫ್ ಧರ್ಮಸ್ಥಳದ ಸುತ್ತ ಮುತ್ತ ನೂರಾರು ಶವಗಳನ್ನು ಹೂಳಲಾಗಿದೆ ಎಂದು ಸಾಮಾಜಿಕ ಜಾಲಾ ತಾಣದಲ್ಲಿ ಬಿತ್ತರಿಸಿ, ಕೇರಳದಲ್ಲೂ ಸಂಚಯನ ಮೂಡಿಸಿದ್ದ.

ಅಲ್ಲದೇ ತಲೆ ಬುರುಡೆ ಸಂಬಂಧ ಗ್ಯಾಂಗ್ ಜೊತೆ ಕೇರಳದ ಸಂಸದರೊಬ್ಬರನ್ನು ಸಂಪರ್ಕಿಸಿದ್ದ ಎಂಬ ಮಾಹಿತಿ ಹಿನ್ನೆಲೆಯಲ್ಲಿ ಈಗಾಗಲೇ ವಿಚಾರಣೆ ಎದುರಿಸಿದ್ದು, ಇಂದು ಮತ್ತೆ ಎಸ್‌ಐಟಿ ಕಚೇರಿಗೆ ಆಗಮಿಸಿದ್ದಾರೆ. ಮತ್ತಿಬ್ಬರ ವಿಚಾರಣೆ:ಸೌಜನ್ಯ ಮಾವ ವಿಠಲ್‌ಗೌಡ ಹಾಗೂ ಅವರ ಸ್ನೇಹಿತ ಪ್ರದೀಪ್ ಸಹ ಎಸ್‌ಐಟಿ ವಿಚಾರಣೆಗೆ ಇಂದು ಹಾಜರಾಗಿದ್ದಾರೆ. ಈಗಾಗಲೇ ಇವರುಗಳನ್ನು ಎಸ್‌ಐಟಿ ವಿಚಾರಣೆ ನಡೆಸಿತ್ತು.ಒಟ್ಟಾರೆ ಈ ಪ್ರಕರಣದಲ್ಲಿ ಇವರೆಲ್ಲರ ವಿಚಾರಣೆ ಬಹಳಷ್ಟು ಕುತೂಹಲ ಕೆರಳಿಸಿದೆ.

## ಮದ್ದೂರಿನ ಪ್ರಕರಣವನ್ನು ಬೇರೆ ಸ್ವರೂಪಕ್ಕೆ ತಿರುಗಿಸಲು ಬಿಜೆಪಿ ರಾಜಕೀಯ ಸಂಚು

# :ಸಚಿವ ಚೆಲುವರಾಯ ಸ್ವಾಮಿ



ಚಿಕ್ಕಮಗಳೂರು: ಮಂಡ್ಯ ಜಿಲ್ಲೆಯ ಮದ್ದೂರಿನ ಪ್ರಕರಣವನ್ನು ಬೇರೆ ಸ್ವರೂಪಕ್ಕೆ ತೆಗೆದು ಕೊಂಡು ಹೋಗಲು ಬಿಜೆಪಿ ಯವರು ಸಂಚು ನಡೆಸಿದ್ದಾರೆ. ಅದಕ್ಕಾಗಿ ಎಲ್ಲಾ ರೀತಿಯ ಪ್ರಯ ತ್ನಗಳನ್ನು ಮಾಡುತ್ತಿದ್ದಾರೆ ಎಂದು ಕೃಷಿ ಸಚಿವ ಚೆಲುವರಾಯ ಸ್ವಾಮಿ ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಕಲ್ಲು ತೂರಾಟಕ್ಕೆ ಸಂಬಂಧಪಟ್ಟಂತೆ ತಪ್ಪಿತಸ್ಥರ ವಿರುದ್ಧ ಈಗಾಗಲೇ ಕ್ರಮ ಕೈಗೊಂಡಿದ್ದೇವೆ. ಪರಿಸ್ಥಿತಿ ಹತೋಟಿಯಲ್ಲಿದೆ. ಆದರೆ, ಬಿಜೆಪಿಯವರು ರಾಜಕಾರಣಕ್ಕಾಗಿ ಪ್ರಚೋದನೆ ನೀಡುತ್ತಿದ್ದಾರೆ ಎಂದು ಕಿಡಿಕಾರಿದರು.

ಜಿಲ್ಲೆಯಲ್ಲಿ ಇಂದು ಎಲ್ಲಾ ಗಣಪತಿಗಳ ಸಾಮೂಹಿಕ ವಿಸರ್ಜನೆ ಕಾರ್ಯಕ್ರಮ ಹಮಿಕೊಳ್ಳಲಾಗಿದೆ. ಆ ವೇಳೆಯಲ್ಲಿ ಕಾನೂನು ಸುವ್ಯವಸ್ಥೆ ರಕ್ಷಣೆಗೆ ಅಗತ್ಯ ಕ್ರಮಕೈಗೊಳ್ಳಲಾಗಿದೆ. ಎಡಿಜಿಪಿ ಸೇ–ರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದಾರೆ ಎಂದು ತಿಳಿಸಿದರು. ಗೃಹಸಚಿವರು ಮತ್ತು ತಾವು ಈಗಾಗಲೇ ಘಟನೆಯ ಬಗ್ಗೆ ಹೆಚ್ಚಿನ ತನಿಖೆ ನಡೆಸಲು ಆದೇಶಿಸಿದ್ದೇವೆ. ನಿನ್ನೆ ಸಂಜೆ ಶಾಂತಿ ಸಭೆಯನ್ನು ನಡೆಸಲಾಗಿದೆ. ಸ್ಥಳೀಯ ಶಾಸಕರು ತಮ ಮಗಳನ್ನು ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ವಿದೇಶಕ್ಕೆ ತೆರಳಿದ್ದಾರೆ. ಅವರ ಅನುಪಸ್ಥಿತಿಯಲ್ಲಿ ನಾವು ಶಾಂತಿ ಸಭೆ ಮಾಡಿ ಜನರಲ್ಲಿ ಮನವಿ ಮಾಡಿಕೊಂಡಿದ್ದೇವೆ ಮತ್ತು ಸಾಮೂಹಿಕ ಗಣೇಶವಿಸರ್ಜನೆಗೆ ಅಗತ್ಯ ಬಂದೋಬಸ್ತ್ ಏರ್ಪಡಿಸುವುದಾಗಿ ವಿವ–ರಿಸಿದರು.

ಮದ್ದೂರಿನ ಗಲಭೆಯನ್ನು ಬೇರೆ ಸ್ವರೂಪಕ್ಕೆ ತೆಗೆದುಕೊಂಡು ಹೋಗುವುದೇ ಬಿಜೆಪಿಯವರ ಆದ್ಯತೆಯಾಗಿದೆ. ರಾಜ್ಯಸರ್ಕಾರ ಈಗಾಗಲೇ ಗಲಭೆಗೆ ಕಾರಣವಾಗಿರುವವರ ವಿರುದ್ಧ ಪ್ರಕರಣ ದಾಖಲಿಸಿ 21 ಮಂದಿಯನ್ನು ಬಂಧಿಸಿದೆ. ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೇ ಕಠಿಣ ಕ್ರಮಕೈಗೊಳ್ಳುವ ಸಂದೇಶವನ್ನು ರವಾನಿಸಲಾಗಿದೆ ಎಂದರು. ಇಲ್ಲಿ ಹಿಂದೂ–ಮುಸ್ಲಿಂ ಎಂದು ಮಿಶ್ರಣ ಮಾಡಿಲ್ಲ, ಮುಸ್ಲಿಮರು ಕಲ್ಲು ತೂರಾಟ ಮಾಡಿದವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಹಿಂದೂ ಸಂಘಟನೆಗಳು ಹಾಗೂ ಕಾರ್ಯಕರ್ತರ ವಿರುದ್ಧ ಈವರೆಗೂ ಯಾವುದೇ ಪ್ರಕರಣ ದಾಖಲಾಗಿಲ್ಲ, ಯಾರನ್ನೂ ಬಂಧಿಸಿಲ್ಲ. ಒಂದು ವೇಳೆ ಹೆಚ್ಚಿನ ತನಿಖೆಯಲ್ಲಿ ಸಾಕ್ಷ್ಯಗಳು ಲಭ್ಯವಾದರೆ ಆ ಸಂದರ್ಭದಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದಿದ್ದಾರೆ.

ಸಾಮೂಹಿಕ ವಿಸರ್ಜನೆಗೆ ಗಣೇಶನ ಮೂರ್ತಿಗಳು ಲಭ್ಯವಿಲ್ಲದೇ ಇದ್ದರೂ ಬೇರೆ ಜಿಲ್ಲೆಗಳಿಂದ ಖರೀದಿಸಿ ತರಲಾಗುತ್ತಿದೆ. ಮದ್ದೂರು ಸೇರಿದಂತೆ ಜಿಲ್ಲೆಯಾದ್ಯಂತ ಗಣೇಶನ ವಿಸರ್ಜನೆಗೆ ಸಮಾಧಾನದಿಂದಲೇ ರಕ್ಷಣೆ ನೀಡುತೇವೆ. ಮುಂದಿನ ದಿನಗಳಲ್ಲಿ ಬಿಜೆಪಿಯವರ ರಾಜಕೀಯಕ್ಕೆ ಸೂಕ್ತ ಉತ್ತರ ನೀಡುತ್ತೇವೆ ಎಂದರು. ಬಿಜೆಪಿಯವರಿಗೆ ರಾಜ–ಕೀಯವಾಗಿ ಚರ್ಚೆ ಮಾಡಲು ವಿಷಯಗಳು ಇಲ್ಲದೇ ಇದ್ದಾಗ ಕೋಮುಗಲಭೆಯನ್ನು ಸೃಷ್ಟಿಸಿ, ಕೋಮು ಭಾವನೆಗಳ ಮೂಲಕವೇ ರಾಜಕಾರಣ ಮಾಡುವ ಪ್ರಯತ್ನ ಮಾಡುವುದು ಮೊದಲಿನಿಂದಲೂ ನಡೆದುಕೊಂಡು ಬಂದಿದೆ. ಈಗಲೂ ಅವರು ಅದೇ ಪ್ರವೃತ್ತಿಯನ್ನು ಅನುಸರಿಸುತ್ತಿದ್ದಾರೆ ಎಂದು ಆಕ್ಷೇಪಿಸಿದರು.

## ಇಂದಿರಾ ಕ್ಯಾಂಟಿನ್‌ನಲ್ಲಿ ಕಳಪೆ ಊಟ :ನೋಟೀಸ್ ಜಾರಿ

ಬೆಂಗಳೂರು: ನಗರದ ಕಡು ಬಡವರ ಅನ್ನಪೂರ್ಣೇಶ್ವರಿ ಎಂದೇ ಗುರುತಿಸಿಕೊಂಡಿರುವ ಇಂದಿರಾ ಕ್ಯಾಂಟೀನ್‌ನಲ್ಲಿ ನೀಡಲಾಗುತ್ತಿರುವ ಆಹಾರ ಜನ ತಿನ್ನಲು ಯೋಗ್ಯವಾಗಿಲ್ಲವೇ ಹಾಗಾದರೆ ಕ್ಯಾಂಟೀನ್‌ಗಳನ್ನು ಬಂದ್ ಮಾಡಲಾಗುವುದೇ ಎಂದು ಅನುಮಾನ ಎಲ್ಲರನ್ನೂ ಕಾಡತೊಡಗಿದೆ. ಸ್ವತಃ ಆಯುಕ್ತರೇ ಇಂದಿರಾ ಕ್ಯಾಂಟಿನ್‌ಗೆ ದಿಢೀರ್ ಭೇಟಿ ಕೊಟ್ಟ ಸಂದರ್ಭದಲ್ಲಿ ಅಲ್ಲಿ ನೀಡುವ ಆಹಾರ ಗುಣಮಟ್ಟ ನೋಡಿ ಹೌಹಾರಿದ್ದಾರಂತೆ ಮಾತ್ರವಲ್ಲ, ಕಾರಣ ಕೇಳಿ ನೋಟೀಸ್ ಜಾರಿ ಮಾಡಿದ್ದಾರೆ.

ಪಶ್ಚಿಮ ವಿಭಾಗದ ನಗರ ಪಾಲಿಕೆ ಅಯುಕ್ತ ಕೆ.ವಿ.ರಾಜೇಂದ್ರ ಅವರು ಎಚ್ ಎಂ ಟಿ ವಾರ್ಡನ ಇಂದಿರಾ ಕ್ಯಾಂಟೀನ್‌ಗೆ ದಿಢೀರ್ ಭೇಟಿ ನೀಡಿದ್ದರು. ಆಗ ಅಲ್ಲಿನ ಅಹಾರ ಕಳಪೆಯಾಗಿರುವುದು ಪತ್ತೆಯಾಗಿತ್ತಂತೆ. ತಿಂಡಿ ತಿನೋದಿಕ್ಕೆ ಅಗಲ್ವಂತೆ ಇಡ್ಲಿ ರಬ್ಬರ್ ತರ ಇದೆಯಂತೆ..ಸಾಂಬಾರನಲ್ಲಿ ತರಕಾರಿಯೇ ಕಾಣಲ್ವಂತೆ. ಇನ್ನೂ ಚಟ್ನಿ ಅಂತು ನೀರಿನ ತರ ಇತ್ತಂತೆ. ಇದರ ಜೊತೆಗೆ ಸ್ವಚ್ಚತೆ ಇಲ್ಲದಿರುವುದು ಕಂಡು ಬಂದಿದೆ. ಸಿಎಂ ಸಿದ್ದರಾಮಯ್ಯ ಅವರ ಕನಸಿನ ಕೂಸು ಇಂದಿರಾ ಕ್ಯಾಂಟೀನ್‌ಗಳಲ್ಲಿ ಈ ಹಿಂದೆ ಕೂಡ ಕ್ಯಾಂಟೀನ್ ಊಟ ಸರಿ ಇಲ್ಲ ಅಂತ ಕೆಲವು ಮಾಧ್ಯಮಗಳು ವರದಿ ಮಾಡಿದ್ದವರು. ಇದಕ್ಕೆ ಪುಷ್ಟಿ ಎಂಬಂತೆ ಇದೀಗ ಖುದ್ದು ಅಯುಕ್ತರೆ ರಿಪೋರ್ಟ್ ನೀಡಿರುವುದರಿಂದ ಅಲ್ಲಿನ ಆಹಾರದ ಗುಣಮಟ್ಟದ ಬಗ್ಗೆ ಅನುಮಾನ ಮೂಡಿಸುವಂತಿ–ದೆ.

ಸದ್ಯ ಅಲ್ಲಿನ ಕ್ಯಾಂಟೀನ್‌ಗೆ ಆಹಾರ ಪೂರೈಕೆ ಮಾಡ್ತಿರೋ ಗುತ್ತಿಗೆದಾರನಿಗೆ ಶೋಕಾಸ್ ನೋಟೀಸ್ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಶೋಕಾಸ್ ನೋಟೀಸ್ ತಲುಪಿದ ಎರಡು ದಿನಗಳಲ್ಲಿ ಉತ್ತರ ನೀಡುವಂತೆ ತಿಳಿಸಲಾಗಿದೆ. ಆಹಾರ ಪೂರೈಕೆ ಮಾಡುವ ಗುತ್ತಿಗೆದಾರರು ಶೋಕಾಸ್ ನೋಟೀಸ್‌ಗೆ ಉತ್ತರ ನೀಡಿದ ನಂತರ ಇಂದಿರಾ ಕ್ಯಾಂಟೀನ್‌ಗಳ ಭವಿಷ್ಯ ನಿರ್ಧಾರವಾಗಲಿದೆ ಎಂದು ತಿಳಿದುಬಂದಿದೆ.



## ಕೇಂದ್ರ ನಗರ ಪಾಲಿಕೆಯಲ್ಲಿ ಆಯುಕ್ತ ರಾಜೇಂದ್ರ ಚೋಳನ್ ರೌಂಡ್ಸ್

ಬೆಂಗಳೂರು: ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಾಥ ವಾಹನಗಳನ್ನು ಗುರುತಿಸಿ ಸಂಚಾರಿ ಇಲಾಖೆಗೆ ಪಟ್ಟಿ ನೀಡಲು ಆಯುಕ್ತ ರಾಜೇಂದ್ರ ಚೋಳನ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಿವಾಜಿನಗರ ವಿಧಾನಸಭಾ ಕ್ಷೇತ್ರಗಳಲ್ಲಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ತುಂಬಾ ದಿನಗಳಿಂದ ರಸ್ತೆ ಬದಿಯೇ ನಿಂತಿರುವಂತಹ ಅನಾಥ ವಾಹನಗಳಿಂದ ಸುಗಮ ಸಂಚಾರಕ್ಕೆ ಸಾಕಷ್ಟು ಸಮಸ್ಯೆ ಆಗಲಿದೆ. ಈ ನಿಟ್ಟಿನಲ್ಲಿ ರಸ್ತೆಗಳ ಮೇಲೆ ಇರುವ ಅನಾಥ ವಾಹನಗಳ ಪಟ್ಟಿಯನ್ನು ತಯಾರಿಸಿ, ಆ ಪಟ್ಟಿಯನ್ನು ಸಂಚಾರಿ ಇಲಾಖೆಗೆ ಒದಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಸ್ಟರಿಂಗ್ ಸೆಂಟರ್ ಗೆ ಭೇಟಿ: ವಸಂತ ನಗರದ ಮೌಂಟ್ ಕಾರ್ಮೆಲ್ ಬಳಿಯಿರುವ ಆಟೋ ಟಿಪ್ಪರ್ ಮಾಸ್ಟರಿಂಗ್ ಪಾಯಿಂಟ್‌ಗೆ ಭೇಟಿ ನೀಡಿ 22 ಆಟೋಗಳು, 5 ಕಾಂಪ್ಯಾಕ್ಟರ್‌ಗಳ ಚಾಲಕ ಮತ್ತು ಸಿಬ್ಬಂದಿಗಳ ಜೊತೆ ಮಾತನಾಡಿ, ಸುರಕ್ಷಾ ಸಾಮಗ್ರಿಗಳನ್ನು ಬಳಸಿಕೊಂಡು ಸಮರ್ಪಕವಾಗಿ ಕಾರ್ಯ ನಿರ್ವಹಿಸಲು ಸೂಚನೆ ನೀಡಿದರು. ಸ್ವಚ್ಛವಾಗಿಡದ ವಾಣಿಜ್ಯ ಸಂಸ್ಥೆಗಳಿಗೆ ನೋಟೀಸ್ ನೀಡಿ: ಹೋಟೆಲ್‌ಗಳು ಮತ್ತು ವಾಣಿಜ್ಯ ಸಂಸ್ಥೆಗಳಿಗೆ ತಮ್ಮ ಆವರಣದಲ್ಲಿ ಯಾವುದೇ ಕಸ ಅಥವಾ ಡೆಬ್ರಿಸ್ ಇರದಂತೆ ಸ್ವಚ್ಛವಾಗಿಟ್ಟುಕೊಳ್ಳಲು ಜಾಗೃತಿ ಮೂಡಿಸಬೇಕು. ಅದನ್ನು ಪಾಲಿಸದಿದ್ದರೆ ಕಠಿಣವಾಗಿ ದಂಡ ವಿಧಿಸಬೇಕು. ಅದರ ಜೊತೆಗೆ ಎಲ್ಲಾ ವಾಣಿಜ್ಯ ಸಂಸ್ಥೆಗಳಿಗೆ ತಮ್ಮ ಆವರಣವನ್ನು ಸ್ವಚ್ಛವಾಗಿ ಕಾಯ್ದುಕೊಳ್ಳುವಂತೆ ನೋಟಿಸ್‌ಗಳನ್ನು



ನೀಡಬೇಕು.

ಎಂದು ಅವರು ಸಲಹೆ ನೀಡಿದರು. ಪಾಲಿಕೆ ಆಸ್ತಿ ಹಾನಿಗೊಳಿಸಿದವರಿಗೆ ದಂಡ ವಿಧಿಸಿ:ಕಟ್ಟಡ ನಿರ್ಮಾಣ ಮಾಡುವವರು ಪಾದಚಾರಿ ಮಾರ್ಗದ ಮೇಲೆ ಕಟ್ಟಡ ಭಗ್ನಾವಶೇಷಗಳು ಅಥವಾ ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ಹಾಕಬಾರದು. ಪಾದಚಾರಿ ಮಾರ್ಗದಲ್ಲಿ ಹಾಕಿ ಪಾಲಿಕೆ ಆಸ್ತಿಯನ್ನು ಹಾನಿಗೊಳಿಸಿದವರಿಗೆ ದಂಡ ವಿಧಿಸಲು ಸೂಚನೆ ನೀಡಿದರು. ಸಡಿಲ ಕಲ್ಲುಗಳು, ಪಾದಚಾರಿ ಮಾರ್ಗದ ಮೇಲೆ ಇಟ್ಟಿರುವ ಕಲ್ಲುಗಳನ್ನು ತೆಗೆದು ಹಾಕಬೇಕು.ಪ್ರಮುಖ ಜಂಕ್ಷನ್ ಗಳ ಸುತ್ತಲಿನ 200 ಮೀಟರ್ ರಸ್ತೆ ಸುಸ್ಥಿತಿಯಲ್ಲಿಡಬೇಕು:ಕೇಂದ್ರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಸಂಚಾರಿ ಜಂಕ್ಷನ್‌ನಲ್ಲಿ ಸುಗಮವಾದ ಸಂಚಾರ ಇರಬೇಕು.

ಈ ಸಂಬಂಧ ಎಲ್ಲಾ ಪ್ರಮುಖ ಜಂಕ್ಷನ್ ಗಳಿಗೆ ಸಂಪರ್ಕ ಕಲ್ಪಿಸಿವ ರಸ್ತೆಗಳ 200 ಮೀಟರ್ ದೂರದವರೆಗೆ ಗುಂಡಿಗಳು, ಮೇಲ್ಮೈ ಪದರ ಹಾಗೂ ಯಾವುದೇ ಅಸಮತೋಲನಗಳಿಲ್ಲದಂತೆ ವಾಹನಗಳು ಸುಗಮವಾಗಿ ಸಂಚರಿಸುವಂತೆ ಮಾಡಲು ಸೂಚನೆ ನೀಡಿದರು. ಪೇ ಅಂಡ್ ಪಾರ್ಕ್ ವ್ಯವಸ್ಥೆಯನ್ನು ಜಾರಿಗೆ ಕ್ರಮ:ಮಿಲ್ಲರ್ ಟ್ಯಾಂಕ್ ಬಂಡ್ ರಸ್ತೆ ಮತ್ತು ಜಾಸ್ಮಾ ದೇವಿ ಭವನ ರಸ್ತೆಗಳಲ್ಲಿ ಕಾರು ಪಾರ್ಕಿಂಗ್ ಮಾಡಿರುವುದನ್ನು ಗಮನಿಸಿದರು. ಇಂತಹ ದೀರ್ಘವಾಗಿ ಪಾರ್ಕಿಂಗ್ ಮಾಡಿರುವ ರಸ್ತೆಗಳ ಪಟ್ಟಿಯನ್ನು ಗುರುತಿಸಿ, ಪಾರ್ಕಿಂಗ್ ನೀತಿಯನ್ನು ಬಳಸಿಕೊಂಡು ಪೇ ಅಂಡ್ ಪಾರ್ಕ್ ವ್ಯವಸ್ಥೆಯನ್ನು ಜಾರಿಗೆ ತರಲು ಕ್ರಮವಹಿಸುವಂತೆ ಸೂಚಿಸಿದರು. ಇಂದಿರಾ ಅಡುಗೆ ಕೋಣೆಯಲ್ಲಿ ಶುಚಿತ್ವ ಕಾಪಾಡಿ: ಜಸ್ಮಾ ಭವನ ರಸ್ತೆಯಲ್ಲಿರುವ ಇಂದಿರಾ ಅಡುಗೆ ಕೋಣೆಗೆ ಭೇಟಿ ನೀಡಿ, ಅಡುಗೆ ಮಾಡುವ ಕಂಟೇನರ್‌ಗಳು ನಿತ್ಯ ಮುಚ್ಚಿಡಬೇಕು. ಅಡುಗೆ ಮಾಡುವ ಸ್ಥಳದಲ್ಲಿ ಶುಚಿತ್ವ ಕಾಯ್ದುಕೊಳ್ಳಲು ಸೂಚನೆ ನೀಡಿದರು.

## ನೇಪಾಳ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ ಮಾಜಿ ಮುಖ್ಯ ನ್ಯಾ.ಸುಶೀಲಾ ಕರ್ಕಿ ನೇಮಕ

ಕಠ್ಮಂಡು: ನೇಪಾಳದ ಪ್ರತಿಭಟನೆಗಳು ಹೆಚ್ಚಾಗುತ್ತಿರುವ ಬೆನ್ನಲ್ಲೇ ಮಧ್ಯಂತರ ಸರ್ಕಾರದ ನೇತೃತ್ವ ವಹಿಸಲು ಜನರಲ್–ಝಡ್ ಮಾಜಿ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ ಅವರನ್ನು ನೇಮಕ ಮಾಡಿದೆ. ನೇಪಾಳ ಸೇನಾ ನಿಯಂತ್ರಣದಲ್ಲಿಯೇ ಇರುವುದರಿಂದ ಮಧ್ಯಂತರ ಸರ್ಕಾರದ ನೇತೃತ್ವ ವಹಿಸಲು ಸುಶೀಲಾ ಕರ್ಕಿ ಅವರನ್ನು ಮಧ್ಯಂತರ ಸರ್ಕಾರದ ನಾಯಕಿಯನ್ನಾಗಿ ನೇಮಿಸಲಾಗಿದೆ.



ದೇಶಾದ್ಯಂತ ನಡೆದ ವರ್ಚುವಲ್ ಸಭೆಯಲ್ಲಿ 5,000ಕ್ಕೂ ಹೆಚ್ಚು ಯುವಕರು ಅವರನ್ನು ಬೆಂಬಲಿಸಿದ ನಂತರ, ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ ಅವರು ನೇಪಾಳದ ಮುಂದಿನ ಪ್ರಧಾನಿ ಹುದ್ದೆಗೆ ಜನರಲ್ ಝಡ್ ಅವರ ಪ್ರಮುಖ ಆಯ್ಕೆಯಾಗಿದ್ದಾರೆ. ಜೆನ್–ಝಡ್ ಚಳವಳಿಯ ನಾಯಕರು ಇಂದು ಬೆಳಿಗ್ಗೆ ವರ್ಚುವಲ್ ಸಭೆಯನ್ನು ನಡೆಸಿದರು, ಅಲ್ಲಿ ಅವರು ಕಠ್ಮಂಡು ಮೇಯರ್ ಬಾಲೆನ್ ಶಾ ಮತ್ತು ಮಾಜಿ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ ಅವರಿಗೆ 15 ಪ್ರತಿನಿಧಿಗಳನ್ನು ಕಳುಹಿಸುವ ಬಗ್ಗೆ ಚರ್ಚಿಸಿದರು.

ನಂತರ ಚಳುವಳಿಯು ಮುಂಬರುವ ಚರ್ಚೆಗಳಿಗೆ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿಯನ್ನು ತಮ್ಮ ಮಧ್ಯಂತರ ನಾಯಕಿಯಾಗಿ ನೇಮಿಸಲು ನಿರ್ಧರಿಸಿತು. ರಾಜ–ಕೀಯ ಪಕ್ಷಗಳೊಂದಿಗೆ ಸಂಯೋಜಿತವಾಗಿರುವ ಯಾವುದೇ ಯುವಕರು ನಾಯಕತ್ವ ಮಾತುಕತೆಗಳಲ್ಲಿ ಭಾಗವಹಿಸಬಾರದು ಎಂದು ಗುಂಪು ಹೇಳಿತ್ತು. ಪ್ರಸ್ತುತ ಯಾವುದೇ ಪಕ್ಷದೊಂದಿಗೆ ಸಂಬಂಧವಿಲ್ಲದ ಸುಶೀಲಾ ಕರ್ಕಿಯನ್ನು ಆಯ್ಕೆ ಮಾಡಲಾಯಿತು. ಸುಶೀಲಾ ಕರ್ಕಿ ಜೂನ್ 7, 1952 ರಂದು ಬಿರಾಟ್‌ನಗರದಲ್ಲಿ ಜನಿಸಿದ ಅವರು, 1979ರಲ್ಲಿ ಬಿರಾಟ್‌ನಗರದಲ್ಲೇ ತಮ್ಮ ಕಾನೂನು ಅಭ್ಯಾಸವನ್ನು ಪ್ರಾರಂಭಿಸಿದರು.

ಮುಂದೆ ಜನವರಿ 22, 2009ರಂದು ಸುಶೀಲಾ ಕರ್ಕಿ ಸುಪ್ರೀಂ ಕೋರ್ಟ್‌ನ ತಾತ್ಕಾಲಿಕ ನ್ಯಾಯಾಧೀಶೆಯಾಗಿ ನೇಮಕಗೊಂಡರು. ಕೇವಲ ಒಂದು ವರ್ಷದಲ್ಲೇ, 2010ರಲ್ಲಿ ಅವರು ಶಾಶ್ವತ ನ್ಯಾಯಾಧೀಶೆಯಾದರು. ಇದರೊಂದಿಗೆ 2016ರಲ್ಲಿ ಅವರು ನೇಪಾಳದ ಮೊದಲ ಮಹಿಳಾ ಮುಖ್ಯ ನ್ಯಾಯಾಧೀಶೆ ಎಂಬ ಐತಿಹಾಸಿಕ ಸಾಧನೆಯನ್ನು ಮಾಡಿದರು. ಹಾಗಾಗಿ, ಅವರು ಜುಲೈ 11, 2016ರಿಂದ ಜೂನ್ 7, 2017ರವರೆಗೆ ಅವರು ಸುಪ್ರೀಂ ಕೋರ್ಟ್‌ನ ಉನ್ನತ ಹುದ್ದೆಯನ್ನು ನಿರ್ವಹಿಸಿದರು.

# ತಿರುಮಗೊಂಡನಹಳ್ಳಿ ರೈಲ್ವೆ ಮೇಲ್ಸೇತುವೆ ಅತೀ ಶೀಘ್ರದಲ್ಲಿ ನಿರ್ಮಾಣ–ಸಚಿವ ಕೆ.ಎಚ್ ಮುನಿಯಪ್ಪ

ದೊಡ್ಡಬಳ್ಳಾಪುರ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ತೂಬಗೆರೆ ಹೋಬಳಿಯ ಐತಿಹಾಸಿಕ ಹಿನ್ನೆಲೆಯುಳ್ಳ ಶ್ರೀ ಕ್ಷೇತ್ರ ಘಾಟಿ ಸುಬ್ರಹ್ಮಣ್ಯ ದೇವಾಲಯದ ಮಾರ್ಗದಲ್ಲಿ ತಿರುಮಗೊಂಡನಹಳ್ಳಿ ಬಳಿ ರೈಲ್ವೆ ಗೇಟ್ ಇದ್ದು, ಮೇಲ್ಸೇತುವೆ ನಿರ್ಮಿಸಲು ಜನರು ಒತ್ತಾಯಿಸಿದ್ದರು. ಈ ಹಿನ್ನೆಲೆ ತಿರುಮಗೊಂಡನಹಳ್ಳಿ ರೈಲ್ವೆ ಗೇಟ್ ಬಳಿ ಮೇಲ್ಸೇತುವೆ ನಿರ್ಮಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಅವರ ನೇತೃತ್ವದಲ್ಲಿ ಸರ್ಕಾರದಿಂದ ಅನುಮೋದನೆಗೊಂಡಿದೆ.

ಅತೀ ಶೀಘ್ರದಲ್ಲಿ ಮೇಲ್ಸೇತುವೆ ಕಾಮಗಾರಿ ಪ್ರಾರಂಭಗೊಳ್ಳಲಿದೆ ಎಂದು ದೊಡ್ಡಬಳ್ಳಾಪುರ ತಾಲೂಕು ಕೃಷಿ ಸಮಾಜದ ಅಧ್ಯಕ್ಷ ಆರ್.ಮುರುಳಿಧರ್ ಹೇಳಿದರು. ಶ್ರೀ ಕ್ಷೇತ್ರ ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ಪ್ರತಿನಿತ್ಯ ಸಾವಿರಾರು ಮಂದಿ ಭಕ್ತಾಧಿಗಳು ಬಂದು ಹೋಗುತ್ತಿರುತ್ತಾರೆ. ರೈಲ್ವೆ ಗೇಟ್ ಹಾಕಿದರೆ ಭಕ್ತಾಧಿಗಳು ಹಾಗೂ ಸುಮಾರು 25ಹಳ್ಳಿಗಳ ಜನ–ರಿಗೆ ತೀವ್ರ ತೊಂದರೆ ಉಂಟಾಗುತ್ತಿತ್ತು. ವಾಹನ ದಟ್ಟಣೆ ಹೆಚ್ಚಾಗುತ್ತಿತ್ತು. ಜನರ ಉಪಯೋಗಕ್ಕಾಗಿ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಮೇಲ್ಸೇತುವೆ ನಿರ್ಮಿಸಲು ನಿರ್ಧಾರ ಮಾಡಲಾಗಿದೆ ಎಂದು ತಿಳಿಸಿದರು.



ಸಚಿವ ಕೆ.ಎಚ್ ಮುನಿಯಪ್ಪನವರು ಯಾರನ್ನೂ ಕಡೆಗಣಿಸುವುದಿಲ್ಲ– ಆರ್.ಮುರುಳಿಧರ್

ಆಹಾರ ಸಚಿವ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪನವರು ಅನುಭವಿ, ಹಿರಿಯ ರಾಜಕಾರಣಿ. ಕೇಂದ್ರ, ರಾಜ್ಯ ರಾಜಕಾರಣದಲ್ಲಿ ಯಾ–ರಿಗೂ ನೋವುಂಟು ಮಾಡದೇ, ಯಾರನ್ನೂ ಕಡೆಗಣಿಸದೇ ರಾಜಕೀಯ ಮಾಡಿಕೊಂಡು ಬಂದಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರನ್ನು ಯಾವುದೇ ಕಾರಣಕ್ಕೂ ಕಡೆಗಣನೆ ಮಾಡುವುದಿಲ್ಲ. ಕಡೆಗಣನೆ ಮಾಡಿರುವ ಇತಿಹಾಸವಿಲ್ಲ ಎಂದು ದೊಡ್ಡಬಳ್ಳಾಪುರ ತಾಲೂಕು ಕೃಷಿ ಸಮಾಜದ ಅಧ್ಯಕ್ಷ ಆರ್.ಮುರುಳಿಧರ್ ತಿಳಿಸಿದ್ದಾರೆ.

ದೊಡ್ಡಬಳ್ಳಾಪುರ ನಗರದ ಭಗತ್ ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪನವರು ಸ್ಥಳೀಯ ಕಾಂಗ್ರೆಸ್ ಪಕ್ಷದ ಚುನಾಯಿತ ಸದಸ್ಯರನ್ನು ಆಹ್ವಾನಿಸದೇ ಕಡೆಗಣಿಸಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ದೊಡ್ಡಬಳ್ಳಾಪುರದಲ್ಲಿ ಕಾಂಗ್ರೆಸ್ ಪಕ್ಷ ಸದೃಢವಾಗಿದೆ. ಮಾಜಿ ಶಾಸಕ ಟಿ.ವೆಂಕಟರಮಣಯ್ಯ ಸೇರಿದಂತೆ ಹಿರಿಯ ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ಪಕ್ಷವನ್ನು ತಳಮಟ್ಟದಿಂದ ಬಲಪಡಿಸುತ್ತಿದ್ದಾರೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಒಂದು ವೇಳೆ ಭಿನ್ನಾಭಿಪ್ರಾಯವಿದ್ದರೆ ಪಕ್ಷದ ಚೌಕಟ್ಟಿನಲ್ಲಿ ಕುಳಿತು ಮಾತಾಡಿ ಬಗೆಹರಿಸಿಕೊಂಡು ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಲಾಗುವುದು ಎಂದು ತಿಳಿಸಿದರು.

ನಾವು ಯುವಕರು. ಕಾಂಗ್ರೆಸ್ ಸಿದ್ಧಾಂತ ಹಾಗೂ ಹಿರಿಯರಾದ ಕೆ.ಎಚ್ ಮುನಿಯಪ್ಪನವರ ಕೈ ಬಲಪಡಿಸಲು ಕಾಂಗ್ರೆಸ್ ಪಕ್ಷದಲ್ಲಿ ಇದ್ದೇವೆ. ಸಚಿವರು ಎಲ್ಲರನ್ನು ಒಗ್ಗೂಡಿಸಿಕೊಂಡು ರಾಜಕಾರಣ ಮಾಡುತ್ತಾರೆ. ಸಚಿವರಲ್ಲಿ ಮೇಲು ಕೀಳು ಎಂಬ ಮನೋಭಾವನೆ ಇಲ್ಲ. ಯಾರನ್ನೂ ಕಡೆಗಣಿಸುವುದಿಲ್ಲ. ಒಂದು ವೇಳೆ ಸಚಿವರ ಗಮನಕ್ಕೆ ಬಾರದೇ ಯಾವುದಾದರು ಎಡವಟ್ಟು ಆಗಿದ್ದರೆ ಅದನ್ನು ಸರಿಪಡಿಸಿಕೊಳ್ಳಲಾಗುವುದು ಎಂದು ಹೇಳಿದರು. ಶಿಷ್ಟಚಾರ ಪ್ರಕಾರ ನಗರಸಭಾ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದರು. ಕಾರ್ಯಕ್ರಮದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ನಗರಸಭಾ ಸದಸ್ಯರು ಭಾಗವಹಿಸಿದ್ದರು. ಆದ–'ರೆ ಕಾಂಗ್ರೆಸ್ ಪಕ್ಷದ ನಗರಸಭಾ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನಿಸಿಲ್ಲ ಎಂಬ ಆರೋಪಗಳು ಕೇಳಿಬಂದಿದೆ. ಇದಕ್ಕೆ ಕಾರಣ ಕೆ.ಎಚ್ ಮುನಿಯಪ್ಪನವರು ಅಲ್ಲ. ಅಧಿಕಾರಿಗಳು ಮಾಡಿದ ಎಡವಟ್ಟಿನಿಂದ ಈ ಆರೋಪಗಳು ಕೇಳಿಬಂದಿದೆ. ಸಚಿವರು ಯಾರನ್ನೂ ಕಡೆಗಣಿಸಿಲ್ಲ. ಕಡೆಗಣಿಸುವುದಿಲ್ಲ ಎಂದರು.

## ಪಾವಗಡ ನಗರದಲ್ಲಿ ಮೂಲಸೌಲಭ್ಯ ಮರೀಚಿಕೆ

ಪಾವಗಡ: ತಾಲೂಕು ಜೆಡಿಎಸ್ ಅಧ್ಯಕ್ಷರಾದ ಈರಣ್ಣ ಮಾತನಾಡಿ ಪಾವಗಡ ಪುರಸಭೆ ವ್ಯಾಪ್ತಿಗೆ ಬರುವ 23 ವಾರ್ಡುಗಳಲ್ಲಿ ಸಮರ್ಪಕವಾದ ಮೂಲಭೂತ ಸೌಕರ್ಯಗಳಿಗೆ ಸಾರ್ವಜನಿಕರು ವಂಚಿತರಾಗುತ್ತಿದ್ದಾರೆ ಎಂದು ಆರೋಪಿಸುತ್ತಿದ್ದು ಪಾವಗಡ ಪಟ್ಟಣದ ಹಳೆ ಊರು ಸುಮಾರು 10 ದಿನಗಳಾದರೂ ಅಲ್ಲಿನ ಸಾರ್ವಜನಿಕರಿಗೆ ಕುಡಿಯುವ ನೀರನ್ನು ಪೂರೈಸಲಾಗುತ್ತಿಲ್ಲ ಪಟ್ಟಣದ 23 ವಾರ್ಡ್ಗಳಲ್ಲಿ ಜೆಜೆ ಎಂ ನೀರಿನ ಪೈಪ್ ಲೈನ್ ಕಾಮಗಾರಿ ಮಾಡಿ ವಾರ್ಡ್ಗಳಲ್ಲಿ ಸಂಪೂರ್ಣ ರಸ್ತೆ ಹಾಳಾಗಿ ಹೋಗಿದ್ದು.

ಸರಿಪಡಿಸುವ ಗೋಜಿಗೆ ಹೋಗದ ಪುರಸಭೆ ಪಾವಗಡಮ್ ಮುಖ್ಯ ರಸ್ತೆ ಅಳವಡಿಸಿರುವ ವಿದ್ಯುತ್ ಕಂಬಗಳಲ್ಲಿ ಲೈಟ್ ಗಳು ರಾತ್ರಿ ವೇಳೆಯಲ್ಲಿ ಹತ್ತಿಕೊಳ್ಳದೆ ಸಾರ್ವಜನಿಕರು ಪರದಾಡುತ್ತಾರೆ ಪಟ್ಟಣದ ಆಫ್ ಬಂಡೆ ಮತ್ತು ಕಣ್ಣು ನಿವಾಸಿಗಳು ಬಂಡೆ ಮೇಲೆ ವಾಸವಾಗಿದ್ದು ಈ ಬಡಾವಣೆಗಳ ನಿವಾಸಿಗಳಿಗೆ ಕನಿಷ್ಠ ಕುಡಿಯುವ ನೀರು ಸರಬರಾಜಿನ ಮೂಲಭೂತ ಸೌಕರ್ಯವೂ ಪುರಸಭೆ ವತಿಯಿಂದ ಸಿಗುತ್ತಿಲ್ಲ ಪಟ್ಟಣದ ಹೆಸರಾಂತ ಟ ಶಿರಡಿ ಸಾಯಿಬಾಬಾ ಮಂದಿರದ ರಸ್ತೆ ಎಲ್ಲಿ ವಿದ್ಯುತ್ ದೀಪ ಕಂಬಗಳು ಇಲ್ಲದೆ ದೇವಸ್ಥಾನಕ್ಕೆ ಬರುವ ಸಾರ್ವಜನಿಕರಿಗೆ ತೊಂದರೆಯಾಗಿದ್ದು ಯಾವುದೇ ಪ್ರಯೋಜನವಾಗಿಲ್ಲ ಪಾವಗಡ ಪಟ್ಟಣದ ಕುಮಾರಸ್ವಾಮಿ ಬಡಾವಣೆಯ ಹೆಸರು ಮರುನಾಮಕರಣ ನಿರ್ಧಾರವನ್ನು ಪುರಸಭೆ ಸಾಮಾನ್ಯ ಸಭೆಯಲ್ಲಿ ಮಂಡಿಸದೆ ಕೈಬಿಡುವುದು ಎಂದು ತೀವ್ರ ವಾಗಿ ಆರೋಪಿಸಿದ್ದಾರೆ.



ಕೂಡಲೇ ಪಾವಗಡ ಪಟ್ಟಣದಲ್ಲಿ ವಾರ್ಡ್ಗಳಲ್ಲಿರುವ ಮೂಲಭೂತ ಸೌಕರ್ಯಗಳನ್ನು ಸರಿಪಡಿಸದೆ ಇದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಜೆಡಿ–ಎಸ್ ಪಕ್ಷದ ವತಿಯಿಂದ ಕಾರ್ಯಕರ್ತರು ಮುಖಂಡರುಗಳು ಪುರಸಭೆಯ ಮುಖ್ಯ ಅಧಿಕಾರಿ ಮನವಿ ಸಲ್ಲಿಸಿದರು.

ಈ ಕಾರ್ಯಕ್ರಮದಲ್ಲಿ ಜೆಡಿಎಸ್ ಪಕ್ಷದ ತಾಲೂಕು ಯುವ ಘಟಕ ಅಧ್ಯಕ್ಷದ ಮಂಜುನಾಥ ಚೌದರಿ, ನಗರ ಅಧ್ಯಕ್ಷ ಗಡ್ಡಂ ತಿಮ್ಮರಾಜು, ಯುವ ನಗರ ಘಟಕ ಅಧ್ಯಕ್ಷ ಬಂಡೆ ಗೋವಿಂದು, ಮುಖಂಡರುಗಳಾದ ಮನು ಮಹೇಶ್ ,ಕಾವಲಗೆರೆ ರಾಮಾಂಜಿ, ಗುಟ್ಟಹಳ್ಳಿ ಮಣಿ,ಯೂನಿಸ್, ನಟರಾಜ್, ಗಂಗಾಧರ್ ನಾಯ್ಡು, ಗಗನ್, ದರ್ಪಾಲ್ , ಕೃಷ್ಣಮೂರ್ತಿ, ಶಾಂತಿ ಮೆಡಿಕಲ್ ದೇವರಾಜ್, ಗೋವಿಂದ ಬಾಬು, ಈರಣ್ಣ,ಇನ್ನು ಮುಂತಾದ ಮುಖಂಡರುಗಳು ಉಪಸದಿದ್ದರು.

## ಸೋಲೂರು ಹೋಬಳಿ ಗಾಗಿ ತಾಲೂಕು ಕಚೇರಿ ಮುಂದೆ ವಕೀಲರ ಹೋರಾಟ

ಮಾಗಡಿ: ಮಾಗಡಿ ತಾಲೂಕು ಕಚೇ–ರಿಯ ಮುಂದೆ ಮಾಗಡಿ ತಾಲೂಕು ವಕೀಲರ ಸಂಘದಿಂದ ತಹಶೀಲ್ದಾರ್ ರವರಿಗೆ ಮನವಿ ಅರ್ಪಿಸಿ ಮಾತನಾಡಿದ ಮಾಜಿ ಅಧ್ಯಕ್ಷ ಪಾಪಣ್ಣ ಸೋಲೂರಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರೇ ಹೆಚ್ಚುವುದರಿಂದ ಮುಂದೆ ಮಾಗಡಿ ಮೀಸಲು ಕ್ಷೇತ್ರವಾಗಲಿದೆ ಎಂಬ ಉದ್ದೇಶದಿಂದ ಶಾಸಕ ಎಚ್ ಸಿ ಬಾಲಕೃಷ್ಣ ಸೋಲುರನ್ನು ನೆಲಮಂಗಲಕ್ಕೆ ಸೇರ್ಪಡೆಗೆ ಸಹಕಾರ ನೀಡಿದ್ದಾರೆ.

ನೆಲಮಂಗಲ ವಿಧಾನಸಭಾ ಕ್ಷೇತ್ರದಲ್ಲಿ ಇದೆ ಎಂದು ಸೋಲು ರನ್ನು ಬೇರೆ ತಾಲೂಕಿನ ಗೆ ಸೇ–ರಿಸಿದಂತೆ ಬಿಡದಿ ಕೂಡ್ಗಲ್ ಹೋಬಳಿಗಳನ್ನು ನಮಗೆ ನೀಡಲಿ ರಾಜ್ಯದ 130ಕ್ಕೂ ಹೆಚ್ಚು ಹೋಬಳಿಯಲ್ಲಿ ಸೋಲೂರನ್ನ ಮಾತ್ರ ಸೇರಿಸುವ ಉದ್ದೇಶ ಏನು ಎಂದು ಶಾಸಕ ಬಾಲಕೃಷ್ಣರವರು ಸ್ಪಷ್ಟಪಡಿಸಬೇಕು ಎಂದು ಪಾಪಣ್ಣ ಅಗ್ರಹಿಸಿದ್ದಲ್ಲಿ ಶಾಸಕರು ನಿರ್ಲಕ್ಷ ತೋರಿದರೆ ತಾಲೂಕಿನ 175 ಮಂದಿ ವಕೀಲರು ನ್ಯಾಯಯುತವಾಗಿ ನಮ್ಮ ಹಕ್ಕು ಪಡೆಯುತ್ತೇವೆ ಎಂದರು.

ತಾಲೂಕು ವಕೀಲರ ಸಂಘದ ಅಧ್ಯಕ್ಷರಾದ ಆರ್ ಸುರೇಶ್ ಅವರು ಮಾತನಾಡಿ ಸೋಲೂರು ಹೋಬಳಿ ನಮ್ಮ ಸ್ವಾತಂತ್ರ್ಯ ಬಂದ ಕಾಲದಿಂದ ಇರುವಂತಹ ಸ್ಥಳ. ಕಂಚಗಲ್ಲು ಬಂಡೆ ಮಠ ಗದ್ದುಗೆ ಮಠ ಚೆಲುವೆ ಮಠ ಆರ್ಯ ಈಡಿಗರ ಮಠ ಸೇರಿ ಸಾಕಷ್ಟು ದೇವಾಲಯಗಳನ್ನು ಹೊಂದಿರುವ ಹೋಬಳಿ ಮಠಗಳ ಪುಣ್ಯಕ್ಷೇತ್ರ. ಮಾಗಡಿ ತಾಲೂಕಿನ ಸೋಲೂರು ನೆಲಮಂಗಲಕ್ಕೆ ಸೇ–ರಿಸಿದರು ಕೂಡ ಒಳನಾಟ ನಮ್ಮಲ್ಲೇ ಇರುತ್ತದೆ.

ಯಾವುದೇ ಕಾರಣಕ್ಕೂ ನೆಲಮಂಗಲಕ್ಕೆ ಬಿಟ್ಟು ಕೊಡುವ ಸಾಧ್ಯತೆ ಇಲ್ಲ. ಈ ಸಂಬಂಧ ರಾಜ್ಯಪಾಲರು ಜಿಲ್ಲಾಧಿಕಾರಿ ಚುನಾವಣಾ ಆಯೋಗ ಹಾಗೂ ಹೈಕೋರ್ಟ್ ಗೆ ರಿಟ್ ಸಲ್ಲಿಸಲಾಗುವುದು ಎಂದರು ಈ ಸಂದರ್ಭದಲ್ಲಿ ಉಪಾಧ್ಯಕ್ಷ ಸಿದ್ದರಾಜು ಮಾಜಿ ಅಧ್ಯಕ್ಷ .ಪಾಪಣ್ಣ ಪ್ರಧಾನ ಕಾರ್ಯದರ್ಶಿ. ಅನಿಲ್ ಕುಮಾರ್ ಕಾರ್ಯದರ್ಶಿ . ಸಹನಾ ಪಂಡಿತ್ ಜಂಟಿ ಕಾರ್ಯದರ್ಶಿ .ವಿಜಯ್ ಕುಮಾರ್ ಕಿರಣ್ ಕುಮಾರ್.ವಸಂತ್. ಶಿವು .ಧನಂಜಯ್ . ಮುನಿಸ್ವಾಮಿ ಇನ್ನೂ ಹಲವು ವಕೀಲರು ಉಪಸ್ಥಿತರಿದ್ದರು.



## ನರ್ಸಿಂಗ್ ಮಾನವೀಯ ಸಂವೇದನೆಯ ವೃತ್ತಿಯಾಧಾರಿತ ಪದವಿ:ಡಾ.ಶಿನ್ನೂರ



ಶಹಾಪುರ: ನರ್ಸಿಂಗ್ ಒಂದು ಪ್ರಮುಖವಾದ ಮಾನವೀಯ ಸಂವೇದನೆಯ ವೃತ್ತಿಯಾಧಾರಿತ ಪದವಿಯಾಗಿದೆ. ಈ ಶುಶ್ರೂಷೆ (ನರ್ಸಿಂಗ್) ಪದವಿಯಲ್ಲಿ ಅಧ್ಯಯನ ಮತ್ತು ತರಬೇತಿ ಪಡೆದ ಅಭ್ಯರ್ಥಿಗಳಿಗೆ ವೈದ್ಯಕೀಯ ಕ್ಷೇತ್ರಗಳಿಗೆ ತುಂಬಾ ಬೇಡಿಕೆಯಿದೆ ಎಂದು ಹಿರಿಯ ವೈದ್ಯರು ಹಾಗೂ ಸ್ಪಂದನಾ ಸಮೂಹ ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಆರ್. ಶಿನ್ನೂರ ಅವರು ಅಭಿಪ್ರಾಯಪಟ್ಟರು.

ನಗರದ ಸ್ಪಂದನಾ ನರ್ಸಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ ಒಂದು ದಿನದ ಓರಿಯಂಟೇಶನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಉತ್ತಮ ಗುಣಮಟ್ಟದ ಕರ್ತವ್ಯ ಮತ್ತು ವೃತ್ತಿಪರತೆಯೊಂದಿಗೆ ಮಾನವೀಯ ಕಾಳಜಿಯಿಂದ ಕಾರ್ಯನಿರ್ವಹಿಸಲು ಸಮಥ–'ರನ್ನಾಗಿ ಮಾಡುವ ನರ್ಸಿಂಗ್ ಪದವಿಯ ಸದುಪಯೋಗಪಡಿಸಿಕೊಳ್ಳಬೇಕು ಎಂದು ಹಲವಾರು ನಿರ್ದೇಶನಗಳ ಮೂಲಕ ವಿದ್ಯಾರ್ಥಿಗಳಿಗೆ ತಿಳಿಸಿದರು.

ನರ್ಸಿಂಗ್ ಕಾಲೇಜಿನ ವ್ಯವಸ್ಥಾಪಕ ನಿರ್ದೇಶಕ ಡಾ. ಬಸವರಾಜ ಇಜೇರಿ ಅವರು ಮಾತನಾಡಿ ವೈದ್ಯಕೀಯ ಮತ್ತು ನರ್ಸಿಂಗ್ ಪದವಿಗಳು ಪರಸ್ಪರ ಪೂರಕ ಸಮಾನ ಉದ್ದೇಶಗಳನ್ನು ಹೊಂದಿರುವ ವೃತ್ತಿಗಳಾಗಿ ಜನರ ಆರೋಗ್ಯವನ್ನು ಸಂರಕ್ಷಿಸುವುದು ಮತ್ತು ಪ್ರತಿಷ್ಠಾಪಿಸುವ ಆಶಯಗಳೊಂದಿಗೆ ಕೆಲಸ ಮಾಡುತ್ತದೆ.

ನರ್ಸಿಂಗ್‌ವು ವೈದ್ಯಕೀಯ ಸೇವಾ ಕ್ಷೇತ್ರದ ಸಂಪೂರ್ಣ ಸಂರಚನೆಯಲ್ಲಿ ವೈದ್ಯ ತಜ್ಞರೊಂದಿಗೆ ಸಂಯೋಜಕರಾಗಿ ರೋಗಿಗಳ ಕಾಳಜಿ ತೆಗೆದುಕೊಳ್ಳುವುದು, ಮಾರ್ಗದರ್ಶನ ನೀಡುವುದು ಮುಂತಾದವುಗಳೊಂದಿಗೆ ತುಂಬಾ ಮಹತ್ವವನ್ನು ಪಡೆದುಕೊಂಡ ಪದವಿಯಾಗಿದೆ ಎಂದು ತಿಳಿಸಿದರು.

ಡಾ. ವಿನಯ ಅವರು ಚಿಕಿತ್ಸಾ ಪ್ರಕ್ರಿಯೆಗಳಲ್ಲಿ ನರ್ಸಿಂಗ್ ಪದವೀದರರ ಪಾತ್ರ ಕುರಿತು ವಿಚಾರ ಮಂಡಿಸಿದರು. ಕಾಲೇಜಿನ ಆಡಳಿತಾಧಿಕಾರಿ ಎಮ್.ಡಿ. ವಾಸಿಮ್ ಆಸ್ಕರಿ ಅವರು ನರ್ಸಿಂಗ್ ಪದವಿ ಪಠ್ಯಕ್ರಮದ ಪ್ರಕ್ರಿಯೆಗಳ ಕುರಿತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪೆನ್ನಿನಾ ಅವರು ನರ್ಸಿಂಗ್ ಪದವಿಯ ಪ್ರಯೋಜನಗಳ ಕುರಿತು ಮಾತನಾಡಿದರು. ಉಪನ್ಯಾಸಕ ಡಾ. ರಾಘವೇಂದ್ರ ಹಾರಣಗೇರಾ ಅವರು ನರ್ಸಿಂಗ ಪದವಿ ಅಧ್ಯಯನದಲ್ಲಿ ಸಮಾಜಶಾಸ್ತ್ರ ಜ್ಞಾನದ ಮಹತ್ವ ಕುರಿತು ಹೇಳಿದರು.

ಈ ಸಂದರ್ಭದಲ್ಲಿ ಅನಿತಾರೆಡ್ಡಿ, ಡಾ. ಶರಣ–ರಡ್ಡಿ, ಡಾ. ಶಿವರಾಯ. ಡಾ. ಜಲಪಾ ಚೋಪ್ರಾ, ಉದಯ ಪಾಟೀಲ ಹಾಗೂ ವಿವಿಧ ವಿಭಾಗದ ತಜ್ಞ ವೈದ್ಯರು, ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು

## ಶಿಕ್ಷಕ ವೃತ್ತಿ ಪವಿತ್ರವಾದದ್ದು :ಮರುಳ ಮಹಾಂತ ಶ್ರೀ

ಶಹಪುರ: ಮುಗ್ಧ ಮಕ್ಕಳಲ್ಲಿ ಅಕ್ಷರವ ಬಿತ್ತಿ ಜ್ಞಾನಾರ್ಜನೆಯನ್ನು ತುಂಬಿ ವಿದ್ಯಾರ್ಥಿಗಳ ಬಾಳಿನ ಭವಿಷ್ಯಕ್ಕೆ ಬೆಳಕನ್ನು ಚೆಲ್ಲಿ ಸುಂದರ ಹಾಗೂ ಸ್ವಾಸ್ಥ್ಯ ಸಮಾಜ ಕಟ್ಟುವ ಶಿಲ್ಪಿಗಳು ಶಿಕ್ಷಕರಾಗಿದ್ದಾರೆ ಆದ–'ರಿಂದ ಶಿಕ್ಷಕ ವೃತ್ತಿ ಪವಿತ್ರವಾದದ್ದು ಎಂದು ಸಗರ ಒಕ್ಕಲಿಗರ ಹಿರೇಮಠದ ಮರುಳ ಮಹಾಂತ ಶ್ರೀಗಳು ಹೇಳಿದರು.

ನಗರದ ಪ್ರತಿಷ್ಠಿತ ವೈಷ್ಣವಿ ಫಂಕ್ಷನ್ ಹಾಲಿನಲ್ಲಿ ಸರಕಾರಿ ಪ್ರೌಢಶಾಲೆ ಸಗರ 2005 –6 ನೇ ಸಾಲಿನ ಎಸ್, ಎಸ್,ಎಲ್,ಸಿ ವಿದ್ಯಾರ್ಥಿಗಳ ವತಿಯಿಂದ ಹಮ್ಮಿಕೊಂಡಿರುವ ಗುರು ವಂದನ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ಗುರುವಂದರೆ ವ್ಯಕ್ತಿಯಲ್ಲ ಅವರೊಂದು ಶಕ್ತಿ ಎಂದು ಬಣ್ಣಿಸಿದರು.

ನಾಗಠಾಣೆ ಹಿರೇಮಠದ ಸೋಮಶೇಖರ ಶಿವಾಚಾರ್ಯರು ಮಾತನಾಡಿ ಅಜ್ಞಾನದಿಂದ ಜ್ಞಾನದೆಡಗೆ,ಕತ್ತಲಿಯಿಂದ ಬೆಳಕಿನೆಡೆಗೆ,ಭಯದಿಂದ ನಿರ್ಭಯದೆಡಗೆ ಕರೆದುಕೊಂಡು ಹೋಗುವನೆ ನಿಜವಾದ ಗುರು, ಗುರುವಿನ ಮಹತ್ವವನ್ನು ತಿಳಿದುಕೊಂಡು ನಡೆದರೆ ಬದುಕಿನಲ್ಲಿ ಯಶಸ್ವಿ ಕಾಣಲು ಸಾಧ್ಯ ಎಂದು ನುಡಿದರು.

ನಿವೃತ್ತ ಹಾಗೂ ಹಿರಿಯ ಶಿಕ್ಷಕ ಎಸ್.ಎನ್.ಪಾಟೀಲ್ ಮಾತನಾಡಿ, ನಮ್ಮ ಕೈಯಲ್ಲಿ ಕಲಿತ ವಿದ್ಯಾರ್ಥಿಗಳು ತಮ್ಮ ಉತ್ತಮ ಭವಿಷ್ಯವನ್ನು ರೂಪಿಸಿಕೊಂಡಿದ್ದಾರೆ,



ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿದ್ದಾರೆ,ಪಾಠ ಕಲಿಸಿದ ಗುರುಗಳಿಗೆ ಇದಕ್ಕಿಂತ ಸಂತೋಷ ಮತ್ತೊಂದಿಲ್ಲ ಮತ್ತೆ 20 ವರ್ಷಗಳ ನಂತರ ಎಲ್ಲಾ ವಿದ್ಯಾರ್ಥಿಗಳು ಸೇರಿ ಸ್ನೇಹ ಸಮ್ಮಿಲನ ಕಾರ್ಯಕ್ರಮ ಹಮ್ಮಿಕೊಂಡಿರುವುದು ನನಗೆ ತುಂಬಾ ಸಂತೋಷವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಮಾರಂಭದ ವೇದಿಕೆಯ ಮೇಲೆ,ನಿವೃತ್ತ ಶಿಕ್ಷಕ ವೀರಭದ್ರಯ್ಯ ಸ್ವಾಮಿ ದೇಸಾಯಿ ಮಠ, ಅಂದಿನ ಶಿಕ್ಷಕ ವೃಂದದವರಾದ ಶಿವವಶರಣಪ್ಪ ಶಿರೂರ ಶೈಲಜಾ ಕುಲಕರ್ಣಿ, ಮಹಾಂತಮ್ಮ ಅಕ್ಕಿ,ಸುರೇಖಾ ಶಕಾಪುರೆ, ಜಯಶ್ರೀ ಆಸ್ರಿತ,ಮಹಾದೇವಿ ಇಂಜಗನೇರಿ, ಶಿವಾನಂದ ಜಾಯಿ,ಅಂದಿನ ಅತಿಥಿ ಶಿಕ್ಷಕರಾದ ರಮೇಶ್ ಕಂಬಾರ, ಅಣ್ಣಾರಾಯ ಕೂಡ್ಲೂರು, ಗುಡದಪ್ಪ ಲಿಂಗಸೂಗುರ,ಶರಣಪ್ಪ ಖಾದಿ, ದ್ವಿತೀಯ ದರ್ಜೆ ಸಹಾಯಕ ಇರ್ಷಾದ್ ಅಹಮದ್, ಸೇರಿದಂತೆ ನೂರಾರು ವಿದ್ಯಾರ್ಥಿಗಳು ಹಾಜರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.